(10)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ ಇವರು ನಿಯಮ-330ಎ ರಡಿಯಲ್ಲಿನ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರ ಉತ್ತರ**

**ಪ್ರಶ್ನೆ:**

ಇಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ 4 ನಿಗಮಗಳ ನೌಕರರುಗಳು ತಮ್ಮ ಬಹುದಿನಗಳ ಬೇಡಿಕೆಯಾದಂತಹ ತಮ್ಮನ್ನು ರಾಜ್ಯ ಸರ್ಕಾರಿ ನೌಕರರನ್ನಾಗಿ ಪರಿಗಣಿಸುವಂತೆ ಸರ್ಕಾರವನ್ನು ಆಗ್ರಹಿಸಿ ಇಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ನಾಡೋಜ ಡಾ: ಪಾಟೀಲ್ ಪುಟ್ಟಪ್ಪರವರ ನೇತೃತ್ವದಲ್ಲಿ ಶಾಂತಿಯುತವಾಗಿ ಉಪವಾಸ ಸತ್ಯಾಗ್ರಹವನ್ನು ನಡೆಸುತ್ತಿದ್ದು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ನೌಕರರ ಮೂಲಭೂತ ಹಕ್ಕುಗಳ ವಿಚಾರವೇದಿಕೆ ನೇತೃತ್ವದಲ್ಲಿ ಈ ಉಪವಾಸ ಸತ್ಯಾಗ್ರಹ ನಡೆಯುತ್ತಿದೆ, ಲಿಂಗಾಯಿತ ಪಂಚಮಶಾಲಿ ಪೀಠದ ಜಯಮೃತ್ಯಂಜಯ ಸ್ವಾಮೀಜಿರವರು ಈ ಉಪವಾಸ ಸತ್ಯಾಗ್ರಹದಲ್ಲಿ ಪಾಲ್ಗೊಂಡು ನೌಕರರ ಬೇಡಿಕೆಗೆ ಬೆಂಬಲವನ್ನು ಸೂಚಿಸುತ್ತಾ ನೌಕರರ ಬೇಡಿಕೆಯನ್ನು ಈಡೇರಿಸುವಂತೆ ಸರ್ಕಾರವನ್ನು ಆಗ್ರಹಿಸುತ್ತಿದ್ದಾರೆ. ಈ ಹಿಂದೆಯೂ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಪ್ರತಿಭಟನೆಗಳನ್ನು ನಡೆಸಿದ್ದನ್ನು ಈ ಸಂದರ್ಭದಲ್ಲಿ ಸರ್ಕಾರದ ಗಮನಕ್ಕೆ ತರಬಯಸುತ್ತೇನೆ. ಅಲ್ಲದೇ ಈ ರೀತಿಯ ಚಳುವಳಿ ಹಾಗೂ ಸತ್ಯಾಗ್ರಹದಂತಹ ಹೋರಾಟದಿಂದ ಸಾರ್ವಜನಿಕರ ಪ್ರಯಾಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ಅಲ್ಲದೇ ಕೆ.ಎಸ್.ಆರ್.ಟಿ.ಸಿ.ಗೆ ಆರ್ಥಿಕ ನಷ್ಟ ಉಂಟಾಗುತ್ತದೆ. ಆದ್ದರಿಂದ ಈ ವಿಷಯವನ್ನು ಸರ್ಕಾರ ಗಂಭೀರವಾಗಿ ಕೈಗೆತ್ತಿಕೊಂಡು ಗಮನ ಹರಿಸಬೇಕಾಗಿದೆ.

ಯಾವುದೇ ರಾಜ್ಯದ ಆರ್ಥಿಕ ಅಭಿವೃದ್ಧಿಗೆ ಅಲ್ಲಿನ ಸಾರಿಗೆ ವ್ಯವಸ್ಥೆ ನರನಾಡಿಯಂತೆ ಕೆಲಸ ನಿರ್ವಹಿಸುತ್ತಿದ್ದು, ಈ ಸಾರಿಗೆ ವ್ಯವಸ್ಥೆಯಲ್ಲಿ ಕೆಲಸ ನಿರ್ವಹಿಸುವ ನೌಕರರ ಬೇಡಿಕೆಯನ್ನು ಈಡೇರಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿರುತ್ತದೆ. ಆದ್ದರಿಂದಈ ನೌಕರರ ಬಹುದಿನಗಳ ಬೇಡಿಕೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ರಾಜ್ಯ ರಸ್ತೆ ಸಾರಿಗೆ ನಿಗಮದ ನೌಕರರುಗಳನ್ನು ಸರ್ಕಾರಿ ನೌಕರರನ್ನಾಗಿ ಪರಿಗಣಿಸಬೇಕಾಗಿ ಈ ಮೂಲಕ ರಾಜ್ಯ ಸರ್ಕಾರವನ್ನು ಒತ್ತಾಯಿಸುತ್ತೇನೆ.

**ಉತ್ತರ:**

ರಾಜ್ಯ ರಸ್ತೆ ಸಾರಿಗೆ ನಿಗಮಗಳು ರಸ್ತೆ ಸಾರಿಗೆ ನಿಗಮಗಳ ಕಾಯ್ದೆ-1950 ರಡಿ ಅಸ್ತಿತ್ವಕ್ಕೆ ಬಂದಿರುವ ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆಗಳಾಗಿರುತ್ತವೆ. ಇದೇ ಮಾದರಿಯ ಬಹಳಷ್ಟು ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆಗಳು ರಾಜ್ಯದಲ್ಲಿ ಅಸ್ತಿತ್ವದಲ್ಲಿ ಇರುತ್ತವೆ. ರಸ್ತೆ ಸಾರಿಗೆ ನಿಗಮಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನ ಹಾಗೂ ಇತರೆ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ನಿಗಮಗಳು ತಮ್ಮ ಆಂತರಿಕ ಮೂಲಗಳಿಂದಲೇ ಭರಿಸಬೇಕಿದೆ.

ರಾಜ್ಯ ರಸ್ತೆ ಸಾರಿಗೆ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸುವಂತೆ ನಿಗಮಗಳ ನೌಕರರ ಕೆಲವು ಒಕ್ಕೂಟಗಳು ಮತ್ತು ಸಂಘಗಳು ಇತ್ತೀಚಿನ ದಿನಗಳಲ್ಲಿ ಒತ್ತಾಯಿಸುತ್ತಿರುವುದು ಹಾಗೂ ಆ ಕುರಿತು ಸರ್ಕಾರ ಮತ್ತು ಆಡಳಿತ ವರ್ಗದ ಮೇಲೆ ಒತ್ತಡ ತರುವ ಸಲುವಾಗಿ ಶಾಂತಿಯುತ ಚಳುವಳಿ/ಸತ್ಯಾಗ್ರಹಗಳನ್ನು ಆಯೋಜಿಸಿರುವುದು ನಿಜ.

ಈ ಬೇಡಿಕೆಯ ಕುರಿತು ಸಾಧಕ ಬಾಧಕಗಳು ಮತ್ತು ಕಾನೂನಾತ್ಮಕ ಹಾಗೂ ಆಡಳಿತಾತ್ಮಕ ವಿಚಾರಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ: ಟಿಡಿ 49 ಟಿಸಿಕ್ಯೂ 2020**

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು